## ಕವಿ ಮನಸು

### ಕಂಪು ಸೂಸುವ ಕೆಂಪು ತಟ್ಟೆ




ತಂಪು ಜಾಗದಲಿಂತು
ಕೆಂಪು ಹವಳದ ತಟ್ಟೆ
ಕಂಪು ಸೂಸುತಲಿಹುದು ಯಾರದೆಂದೆ
ಹಳದಿ ಮುತ್ತಿದು ಚಂದ
ಬಳಿಗೆ ಬಂದಿದೆ ಭೃಂಗ
ಬೆಳೆದ ಗಿಡದಲಿ ಹೂವು ಅರಿತುಕೊಂಡೆ

ಹಸಿರಿನೆಲೆಗಳ ಗಿಡವು
ಬಸಿರಿನಂತಿದೆ ಮೊಗ್ಗು
ಕುಸುಮವರಳಿದೆ ಕೆಲವು ಮನವ ಸೆಳೆಯೆ
ನಸುಕು ಸರಿಯುತಲಿತ್ತು
ನಿಶೆಯ ಮುಸುಕನು ಸರಿಸೆ
ಬಿಸಿಲ ತರುವನು ರವಿಯು ತಿಮಿರ
ಕಳೆಯೆ॥


**– ಪೆರ್ಮುಖ ಸುಬ್ರಹ್ಮಣ್ಯ ಭಟ್**







## ತುಂಗಭದ್ರಾ ನೀರಿನ ಮಟ್ಟ



| ಶುಕ್ರವಾರ : 05-01-2024 | |
|---|---|
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1589.04 ಅಡಿ |
| ಒಳ ಹರಿವು | 00 ಕ್ಯುಸೆಕ್ |
| ಹೊರ ಹರಿವು | 00 ಕ್ಯುಸೆಕ್ |
| ಇಂದಿನ ಸಾಮರ್ಥ್ಯ | 10.246 ಟಿಎಂಸಿ |
| ಗರಿಷ್ಠ ಸಾಮರ್ಥ್ಯ | 105.788 ಟಿಎಂಸಿ |
| **ಕಳೆದ ವರ್ಷ ಇದೇ ದಿನ** | |
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1623.66 ಅಡಿ |
| ಒಳ ಹರಿವು | 00 ಕ್ಯುಸೆಕ್ |
| ಹೊರ ಹರಿವು | 8749 ಕ್ಯುಸೆಕ್ |
| ಸಾಮರ್ಥ್ಯ | 72.201 ಟಿಎಂಸಿ |

### ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತುಲೋಪ, ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರ ರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
– ಜಾಹೀರಾತು ವ್ಯವಸ್ಥಾಪಕರು.

### ಅನಾಥ ಶಿಶುಗಳ ಪಾಲಿನ ಆರಾಧ್ಯ ದೇವರಾದ

# ಬಸವಲಿಂಗ ಪಟ್ಟದ್ದೇವರಿಗೆ ನಾಡೋಜ ಪದವಿ

ರಾಜ್ಯದಲ್ಲಿ ಅನಾಥ ಶಿಶುಗಳ ಪಾಲನೆ ಪೋಷಣೆ ಮಾಡುವ ಅಪರೂಪದ ಸಂತ, ಬಸವಕಲ್ಯಾಣ ಅನುಭವ ಮಂಟಪದ ಅಧ್ಯಕ್ಷರೂ ಆಗಿರುವ ಡಾ.ಬಸವಲಿಂಗ ಪಟ್ಟದ್ದೇವರು ಸಮಾಜದಲ್ಲಿ ಹೆತ್ತವರಿಗೂ, ಸಮಾಜಕ್ಕೂ ಬೇಡವಾದ ಹಸುಳೆ, ಬಡ, ನಿರ್ಗತಿಕ, ಅನಾಥ ಶಿಶುಗಳ ಪಾಲಿನ ಆರಾಧ್ಯ ದೇವರಾಗಿದ್ದಾರೆ. ಅವರ ಅಗಣಿತ ಮಾನವೀಯ, ಸಾಮಾಜಿಕ, ಶೈಕ್ಷಣಿಕ, ಧಾರ್ಮಿಕ ಕಾರ್ಯಗಳನ್ನು ಪರಿಗಣಿಸಿ ಹಂಪಿ ಕನ್ನಡ ವಿಶ್ವವಿದ್ಯಾಲಯದ ಕೊಡಮಾಡುವ ನಾಡಿನ ಹೆಸರಾಂತ ಪ್ರತಿಷ್ಠಿತ ನಾಡೋಜ ಪ್ರಶಸ್ತಿ ಅವರನ್ನು ಹುಡುಕಿಕೊಂಡು ಬಂದಿರುವುದು ಭಕ್ತರಿಗೆ ಇನ್ನಿಲ್ಲದ ಸಂತಸ ನೀಡಿದೆ.

**ಬಾಲ್ಯ ಜೀವನ:** ಈಗಿನ ತೆಲಂಗಾಣ ರಾಜ್ಯದ ಮೇದಕ್ ಜಿಲ್ಲೆ ನಾರಾಯಣ ಖೇಡ್ ತಾಲ್ಲೂಕಿನ ನಾಗೂರ (ಬಿ) ಗ್ರಾಮದ ಭಾಗೀರಥಿ ರಾಚಪ್ಪಾ ಕಾಡೋದೆ ದಂಪತಿಯ ಮಗನಾಗಿದ್ದ ಅವರನ್ನು ಲಿಂ. ಡಾ.ಚನ್ನಬಸವ ಪಟ್ಟದ್ದೇವರು 1985ರ ಜೂನ್ 15ರಂದು ಹಿರೇಮಠ ಸಂಸ್ಥಾನ ಭಾಲ್ಕಿಯ ಪಟ್ಟಾಧಿಕಾರಿಯನ್ನಾಗಿ ನೇಮಿಸಿದರು.

ಮಠದ ಪೀಠಾಧಿಪತಿಯಾಗಿ ಕೇವಲ ಭಕ್ತರಿಗೆ ದರುಶನ ನೀಡುವ ಕಾಯಕ ಮಾತ್ರ ನನ್ನದಲ್ಲ. ಅದಕ್ಕೆ ಬದಲಾಗಿ ಸಮಾಜದಲ್ಲಿರುವ ನೊಂದ, ಬೆಂದ ಕಂದಮ್ಮಗಳಿಗೆ, ಡೊಂಬರಾಟದ ಓಣಿಯ ಮಕ್ಕಳಿಗೆ ಆಸರೆಯಾಗಬೇಕು. ಆ ಮಕ್ಕಳಿಗೆ ಉಚಿತ ಅನ್ನ, ಆಶ್ರಯ, ಶಿಕ್ಷಣ ನೀಡಿ ಸಮಾಜದಲ್ಲಿ ಗೌರವಯುತ ನಾಗರಿಕರಾಗಿ ಬಾಳುವಂತೆ ಮಾಡಬೇಕು ಎಂಬ ಸಂಕಲ್ಪದೊಂದಿಗೆ ಅಂದು ಆರಂಭಿಸಿದ ಉದಾತ್ತ, ಶ್ರೇಷ್ಠ ಮಾನವೀಯ ಕಾರ್ಯ ಸತತ ನಾಲ್ಕು ದಶಕಗಳಿಂದ ಹಾಗೆಯೇ ನಡೆದುಕೊಂಡು ಬರುತ್ತಿದೆ.

ಹೆತ್ತವರು, ಸಮಾಜ ಯಾವ ಮಕ್ಕಳನ್ನು ಬೇಡವೆಂದು ತಿಪ್ಪಗುಂಡಿ, ದೇವಾಲಯ, ಆಸ್ಪತ್ರೆ, ರಸ್ತೆ ಅಕ್ಕಪಕ್ಕ ಸೇರಿದಂತೆ ಇತರ ಸ್ಥಳಗಳಲ್ಲಿ ಎಸೆದ ಮಕ್ಕಳಿಗೆ ಕರಡ್ಯಾಳದ ಸ್ವದೇಶಿ ದತ್ತು ಕೇಂದ್ರದಲ್ಲಿ ಪಾಲನೆ, ಪೋಷಣೆ ಮಾಡುತ್ತಿದ್ದಾರೆ. ಯಾರಿಗೂ ಬೇಡವಾದ ಮಕ್ಕಳ ಭವಿಷ್ಯ ರೂಪಿಸುವುದೇ ನಿಜವಾಗಿಯೂ ಸ್ವಾಮೀಜಿಯಾಗಿ ಮಾಡುವ ಕಾರ್ಯ ಎಂದರಿತು ಶ್ರಮಿಸುತ್ತಿದ್ದಾರೆ. ಮಕ್ಕಳಿಗೆ ಯಾವತ್ತೂ ನಾನು ಅನಾಥ ಎಂಬ ಭಾವ ಬರಬಾರದು ಎಂದು ಪ್ರತಿವರ್ಷ (ಆಗಸ್ಟ್ 25 )ತಮ್ಮ ಜನ್ಮದಿನವನ್ನು ಸುದೈವಿ (ಅನಾಥ) ಮಕ್ಕಳ ಜನ್ಮದಿನವನ್ನಾಗಿ ಆಚರಿಸುತ್ತಾ ಮಾಜಿ ರಾಷ್ಟ್ರಪತಿ ಎಸ್. ರಾಧಾಕೃಷ್ಣನ್, ಮಾಜಿ ಪ್ರಧಾನಿ ಪಂಡಿತ್ ಜವಹರಲಾಲ್ ನೆಹರು ಅವರ ಸಾಲಿಗೆ ಸೇರಿದ್ದಾರೆ.



2003ರಿಂದ ಇಲ್ಲಿಯವರೆಗೂ ಇಪ್ಪತ್ತು ವರ್ಷಗಳ ಕಾಲದಿಂದ ಎಲ್ಲೆಲ್ಲಿ ಅನಾಥ ಮಗು ಇದೆ ಎಂಬ ಸುದ್ದಿ ಬರುತ್ತದೆಯೋ, ಅಲ್ಲಿಗೆ ತೆರಳಿ ಆ ಮಕ್ಕಳನ್ನು ಕಾನೂನಾತ್ಮಕವಾಗಿ ತಾವು ನಡೆಸುತ್ತಿರುವ ದತ್ತು ಕೇಂದ್ರಕ್ಕೆ ಕರೆ ತಂದಿದ್ದಾರೆ. ಮಕ್ಕಳಿಗೆ ತಾಯಿಯ ಪ್ರೀತಿಯ ಕೊರತೆ ಕಾಡಬಾರದೆಂದು ಮಕ್ಕಳ ಪಾಲನೆಗಾಗಿ ಮಹಿಳಾ ಸಿಬ್ಬಂದಿಯನ್ನು ನೇಮಿಸಿದ್ದಾರೆ. ಇವರಲ್ಲಿ ಹೆಚ್ಚಿನ ಮಕ್ಕಳು ಕುರುಡರು, ಕುಂಟರು, ಮಾನಸಿಕ ಅಸ್ವಸ್ಥರಾಗಿದ್ದಾರೆ. ಮಾನಸಿಕ, ದೈಹಿಕವಾಗಿ ಚೆನ್ನಾಗಿದ್ದ ಸುಮಾರು 65 ಮಕ್ಕಳಿಗೆ ಮಕ್ಕಳ ಭಾಗ್ಯ ಪ್ರಾಪ್ತಿಯಾಗದ ದಂಪತಿಗಳಿಗೆ ಹೊರ ರಾಷ್ಟ್ರ ಕುವೈತ್, ನೈರೋಬಿ, ಗದಗ, ಹೈದರಾಬಾದ್, ಬೆಂಗಳೂರು ಒಳಗೊಂಡು ಅನೇಕ ರಾಷ್ಟ್ರ, ರಾಜ್ಯಗಳ ಪೋಷಕರು ಕಾರಾ ಗೈಡ್ ಲೈನ್ ನಿಯಮಗಳ ಪ್ರಕಾರ ದತ್ತು ಪಡೆದು ಸಾಕುತ್ತಿದ್ದಾರೆ.

ಮಕ್ಕಳ ಆರೋಗ್ಯವನ್ನು ನೋಡಿಕೊಳ್ಳಲು ತಜ್ಞ ವೈದ್ಯರನ್ನು ನೇಮಿಸಿದ್ದಾರೆ. ಅಂಗವಿಕಲ, ವಿಶೇಷ ಚೇತನ ಮಕ್ಕಳ ವ್ಯಕ್ತಿತ್ವ ವಿಕಾಸಕ್ಕೆ ಸಹಕರಿಸುವ ನಿಟ್ಟಿನಲ್ಲಿ ಬೆಂಗಳೂರಿನ ಖ್ಯಾತ ಮನೋವೈದ್ಯರಾದ ಸಿ.ಆರ್.ಚಂದ್ರಶೇಖರ ಅವರಿಂದ ಆಪ್ತ ಸಮಾಲೋಚನೆ ಮಾಡಿಸಿದ್ದಾರೆ. ಮಕ್ಕಳ ಭವ್ಯ ಭವಿಷ್ಯಕ್ಕೆ ಅಗತ್ಯವಾಗಿರುವ ಗುಣಾತ್ಮಕ ಶಿಕ್ಷಣವನ್ನು ಕರಡ್ಯಾಳದ ಗುರುಕುಲ, ಭಾಲ್ಕಿಯ ಸಂಗಮೇಶ್ವರ, ಗುರುಪ್ರಸಾದ ಪ್ರೌಢ ಶಾಲೆಯಲ್ಲಿ ನೀಡುತ್ತಿದ್ದಾರೆ. ಪ್ರತಿವರ್ಷ ಸುಮಾರು 500 ನೂರು ಬಡ ಮಕ್ಕಳಿಗೆ ಹಾನಗಲ್ ಕುಮಾರೇಶ್ವರ ಉಚಿತ ಪ್ರಸಾದ ನಿಯಲದಲ್ಲಿ ಆಶ್ರಯ ನೀಡಿ, ಅಕ್ಷರ ದಾಸೋಹ ನೀಡುವ ಮಹೋನ್ನತ ಕಾರ್ಯ ಮಾಡುತ್ತಿದ್ದಾರೆ. ಈಚೆಗೆ ಸುದೈವಿ ಯುವತಿಯರಾದ ಸೌಭಾಗ್ಯ, ತ್ರಿವೇಣಿ ಸೇರಿದಂತೆ ಇತರರಿಗೆ ಉತ್ತಮ ಮನೆತನದ ವರ ನೋಡಿ ಪೋಷಕರ ಸ್ಥಾನದಲ್ಲಿ ನಿಂತು ಮದುವೆ ಮಾಡಿಸಿದ್ದಾರೆ.

1992 ರಲ್ಲಿ ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ನ್ನು ಸ್ಥಾಪಿಸಿ ನಲವತ್ತು ಮಕ್ಕಳಿಂದ ಪ್ರಾಂಭವಾದ ಸಂಸ್ಥೆಯಲ್ಲಿ ಇಂದು 20 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಓದುತ್ತಾರೆ. ಒಂದು ಸಾವಿರಕ್ಕೂ ಅಧಿಕ ಶಿಕ್ಷಕರು, ಸಿಬ್ಬಂದಿ ಕಾರ್ಯ ಮಾಡುತ್ತಿದ್ದಾರೆ.

ಬಸವಲಿಂಗ ಪಟ್ಟದ್ದೇವರ ಸಾಮಾಜಿಕ, ಮೇರು ವ್ಯಕ್ತಿತ್ವ ಮಾನವೀಯ ಕಾರ್ಯಗಳನ್ನು ಗುರುತಿಸಿ ಗುಲ್ಬರ್ಗ ವಿಶ್ವವಿದ್ಯಾಲಯವು ಗೌರವ ಡಾಕ್ಟರೇಟ್ ಪ್ರಶಸ್ತಿ, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ವತಿಯಿಂದ ರಮಣಶ್ರೀ ಶರಣ ಪ್ರಶಸ್ತಿ, ಸುವರ್ಣ ಕರ್ನಾಟಕ ಏಕೀಕರಣ ಪುರಸ್ಕಾರ, ರಾಷ್ಟ್ರೀಯ ಬಸವಶ್ರೀ ಪುರಸ್ಕಾರ, ಕಲ್ಯಾಣ ಬಸವಶ್ರೀ ಹಾಗೂ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿಗಳಿಗೆ ಭಾಜನರಾದ ಪಟ್ಟದ್ದೇವರಿಗೆ ಪ್ರಸಕ್ತ ಸಾಲಿನ ನಾಡೋಜ ಪ್ರಶಸ್ತಿ ಕೊಡಮಾಡುತ್ತಿರುವುದು ಸಂತಸದ ಸಂಗತಿ. ಅರ್ಹರಿಗೆ ಪ್ರಶಸ್ತಿಗಳು ದೊರೆತಾಗ ಅವುಗಳ ಮೌಲ್ಯ ಹೆಚ್ಚುತ್ತದೆ ಎಂಬ ಮಾತು ಅಕ್ಷರಶಃ ಮತ್ತೊಮ್ಮೆ ಸಾಬೀತಾಗಿದೆ.

**– ಶಶಿಧರ ಕೋಸಂಬೆ**
**ಸದಸ್ಯರು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ**
**ಬೆಂಗಳೂರು**

# ಕನ್ನಡ ವಿವಿ 32ನೇ ನುಡಿಹಬ್ಬದಲ್ಲಿ ಸಾಧಕರಿಗೆ ನಾಡೋಜ ಗೌರವ

**ಕನ್ನಡ ವಿವಿ ಮಂಟಪ ಸಭಾಂಗಣದಲ್ಲಿ ಜ.10ರಂದು ನಡೆಯುವ 32ನೇ ಘಟಿಕೋತ್ಸವದಲ್ಲಿ ರಾಜ್ಯಪಾಲರಿಂದ ನಾಡೋಜ ಪದವಿ ಪ್ರದಾನ**



## ಪೂಜ್ಯ ಶ್ರೀ ಡಾ. ಬಸವಲಿಂಗ ಪಟ್ಟದೇವರು

ಕಲ್ಯಾಣ-ಕರ್ನಾಟಕ ಭಾಗವಾದ ಬೀದರಿನ ಭಾಲ್ಕಿ ಹಿರೇಮಠ ಸಂಸ್ಥಾನದ ಪರಮಪೂಜ್ಯರಾದ ಡಾ. ಬಸವಲಿಂಗ ಪಟ್ಟದ್ದೇವರು 25.08.1950 ರಲ್ಲಿ ಜನಿಸಿದರು. ಬಸವತತ್ವವನ್ನೇ ಬದುಕಿನ ಆದರ್ಶವನ್ನಾಗಿ ಮಾಡಿಕೊಂಡಿದ್ದ ಪೂಜ್ಯ ಲಿಂಗೈಕ್ಯ ಡಾ. ಚನ್ನಬಸವ ಪಟ್ಟದ್ದೇವರ ಬಸವಸಂಸ್ಕೃತಿ ಪರಂಪರೆಯನ್ನು ಮುಂದುವರಿಸಿಕೊಂಡು ಬಂದವರು. ಗಡಿಭಾಗವಾದ ಬೀದರ್ ಪರಿಸರದಲ್ಲಿ ಕನ್ನಡ-ಕನ್ನಡಿಗ-ಕರ್ನಾಟಕ ಪ್ರಜ್ಞೆಯನ್ನು ಗಟ್ಟಿಯಾಗಿ ನೆಲೆಯೂರುವಂತೆ ಮಾಡಿದರು. ಡಾ. ಬಸವಲಿಂಗ ಪಟ್ಟದ್ದೇವರು ಬಹುಭಾಷಿಕ ವಿದ್ವಾಂಸರು. ಶರಣ ಸಾಹಿತ್ಯ ಕುರಿತು 30ಕ್ಕೂ ಹೆಚ್ಚು ಕೃತಿಗಳನ್ನು ಬರೆದಿದ್ದಾರೆ. ಇವರ ಕೃತಿಗಳು ಮರಾಠಿ, ತೆಲುಗು ಭಾಷೆಗೆ ಅನುವಾದಗೊಂಡು ಜನಪ್ರಿಯತೆ ಪಡೆದಿವೆ. ಪೂಜ್ಯರಿಗೆ ಬಸವತತ್ವ ಪ್ರಸಾರವೇ ಪ್ರಾಣಜೀವಾಳವಾಗಿದೆ. ಆದಕಾರಣ ಪೂಜ್ಯರು ರಾಜ್ಯ-ಹೊರರಾಜ್ಯಗಳಲ್ಲಿ ಮಹಾರಾಷ್ಟ್ರ ಬಸವ ಪರಿಷತ್ತು, ತೆಲಂಗಾಣ ಬಸವ ಪರಿಷತ್ತು, ಅನುಭವ ಮಂಟಪ ಸಂಸ್ಕೃತಿ ವಿದ್ಯಾಲಯ ಸ್ಥಾಪಿಸಿ ಬಸವತತ್ವದ ಪ್ರಸ್ತುತೆಯನ್ನು ನಾಡಿನಾದ್ಯಂತ ಪ್ರಸಾರಿಸುವ ಕಾಯಕದಲ್ಲಿ ನಿರತರಾಗಿದ್ದಾರೆ. ಈ ಪರಿಷತ್ತುಗಳಿಂದ ಮರಾಠಿ-190, ತೆಲುಗು-32, ಹಿಂದಿ-20, ಇಂಗ್ಲೀಷ್-2, ಕನ್ನಡ-150 ಕೃತಿಗಳನ್ನು ಪ್ರಕಟಿಸಲಾಗಿದೆ. ಬಸವ ಕಲ್ಯಾಣದ ವಿಶ್ವ ಬಸವಧರ್ಮ ಟ್ರಸ್ಟ್ ಅನುಭವ ಮಂಟಪದ ಅಧ್ಯಕ್ಷರಾಗಿ ಹಲವಾರು ವಿನೂತನ ಕಾರ್ಯಕ್ರಮಗಳನ್ನು ಸಂಯೋಜಿಸಿದ್ದಾರೆ. ಶರಣಸಾಹಿತ್ಯ-ಸಂಸ್ಕೃತಿ ಅಧ್ಯಯನ ಮಾಡಿದ ವಿದ್ವಾಂಸರಿಗೆ ಪ್ರತಿವರ್ಷ ಡಾ. ಚೆನ್ನಬಸವ ಪಟ್ಟದ್ದೇವರು ಅನುಭವಮಂಟಪ ಪ್ರಶಸ್ತಿ, ಡಾ. ಜಯದೇವಿತಾಯಿ ಲಿಗಾಡೆ ರಾಷ್ಟ್ರೀಯ ಪುರಸ್ಕಾರ, ಡಾ. ಎಂ.ಎಂ. ಕಲಬುರ್ಗಿ ಸಾಹಿತ್ಯ ಸಂಶೋಧನೆ ರಾಷ್ಟ್ರೀಯ ಪುರಸ್ಕಾರ ಮತ್ತು ಒಕ್ಕಲಿಗ ಮುದ್ದಣ್ಣನ ಸಾವಯವಕೃಷಿ ಪ್ರಶಸ್ತಿ ನೀಡಿ ಗೌರವಿಸುತ್ತಿದ್ದಾರೆ. ಬಸವ ಕಲ್ಯಾಣದಲ್ಲಿ ನಿರ್ಮಾಣವಾಗಲಿರುವ ನೂತನ ಅನುಭವಮಂಟಪದ ನಿರ್ಮಾಣದ ಹಿಂದೆ ಸರಕಾರಕ್ಕೆ ಒತ್ತಾಸೆಯಾಗಿ ನಿಂತವರು ಪರಮಪೂಜ್ಯ ಡಾ. ಬಸವಲಿಂಗ ಪಟ್ಟದ್ದೇವರು. ಗಡಿಭಾಗದ ಬಡಮಕ್ಕಳಿಗೆ ಶಿಕ್ಷಣ ದೊರಕಿಸಿಕೊಡುವ ಪೂಜ್ಯರು ಮಾನವೀಯ, ಶೈಕ್ಷಣಿಕ, ಸಾಮಾಜಿಕ, ಕೃಷಿ ಹಾಗೂ ಧಾರ್ಮಿಕವಾಗಿ ಶರಣರ ಕಾಯಕ ಮತ್ತು ದಾಸೋಹ ತತ್ವಗಳನ್ನು ನಿರಂತರವಾಗಿ ಅನುಷ್ಠಾನಗೊಳಿಸಿದ ಕೀರ್ತಿಗೆ ಪಾತ್ರರಾಗಿದ್ದಾರೆ.

ಪರಮಪೂಜ್ಯ ಡಾ. ಬಸವಲಿಂಗ ಪಟ್ಟದ್ದೇವರ ಶೈಕ್ಷಣಿಕ, ಧಾರ್ಮಿಕ ಹಾಗೂ ಸಾಮಾಜಿಕ ಸಾಧನೆಗಳನ್ನು ಪುರಸ್ಕರಿಸಿ ಕನ್ನಡ ವಿಶ್ವವಿದ್ಯಾಲಯವು 32ನೇ ನುಡಿಹಬ್ಬದಲ್ಲಿ ಪ್ರತಿಷ್ಠಿತ 'ನಾಡೋಜ' ಗೌರವ ಪದವಿಯನ್ನು ನೀಡಿ ಗೌರವಿಸುತ್ತಿದೆ.



## ಪ್ರೊ. ಟಿ.ವಿ. ಕಟ್ಟಿಮನಿ

ಪ್ರೊ. ತೇಜಸ್ವಿ ವೆಂಕಪ್ಪ ಕಟ್ಟಿಮನಿ ಅವರು 14 ಜೂನ್ 1955ರಲ್ಲಿ ಕೊಪ್ಪಳ ಜಿಲ್ಲೆ ಅಳವಂಡಿಯಲ್ಲಿ ಜನಿಸಿದರು. ಕರ್ನಾಟಕ ವಿಶ್ವವಿದ್ಯಾಲಯದಿಂದ ಹಿಂದಿ ವಿಷಯದಲ್ಲಿ ಎಂ.ಎ.ಪಿಎಚ್;ಡಿ ಪದವಿಯನ್ನು ಪಡೆದಿದ್ದಾರೆ. 44 ವರ್ಷಗಳ ಕಾಲ ಶಿಕ್ಷಣ ಕ್ಷೇತ್ರದಲ್ಲಿ ದುಡಿದಿರುವ ಪ್ರೊ. ಟಿ.ವಿ. ಕಟ್ಟಿಮನಿಯವರು 2014 ರಿಂದ 2019 ರವರೆಗೆ ಮಧ್ಯಪ್ರದೇಶದ ಅಮರ್‌ಕಂಟಕ್‌ನ ಇಂದಿರಾಗಾಂಧಿ ರಾಷ್ಟ್ರೀಯ ಬುಡಕಟ್ಟು ವಿಶ್ವವಿದ್ಯಾಲಯದ ಕುಲಪತಿಗಳಾಗಿ ಸೇವೆ ಸಲ್ಲಿಸಿದ್ದಾರೆ. ಈಗ ಆಂಧ್ರಪ್ರದೇಶ ವಿಜಯನಗರದ ಕೇಂದ್ರೀಯ ಬುಡಕಟ್ಟು ವಿಶ್ವವಿದ್ಯಾಲಯ ಕುಲಪತಿಗಳಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಸಾಮಾಜಿಕ ಬದ್ಧತೆಯೊಂದಿಗೆ ತಮ್ಮ ಬರಹಗಳನ್ನು ಆರಂಭಿಸಿರುವ ಶ್ರೀಯುತರು ಕನ್ನಡ, ಹಿಂದಿ, ಗುಜರಾತಿ ಹಾಗೂ ಇಂಗ್ಲೀಷ್ ಭಾಷೆಗಳಿಗೆ ಸಾಹಿತ್ಯ ಮತ್ತು ಸಾಹಿತ್ಯೇತರ 25ಕ್ಕೂ ಹೆಚ್ಚು ಕೃತಿಗಳನ್ನು ಅನುವಾದ ಮಾಡಿ ಸಮರ್ಥ ಅನುವಾದಕರೆಂಬ ಕೀರ್ತಿಗೆ ಪಾತ್ರರಾಗಿದ್ದಾರೆ. 'ರಾಷ್ಟ್ರೀಯ ಶಿಕ್ಷಣ ನೀತಿ-2020 ಎ ಗೇನ್ ಚೇಂಜರ್', 'ಸ್ವಚ್ಛ ಭಾರತ್-ಏಕ್ ಕದಮ್ ಸ್ವಚ್ಛತಾಕಿ ಒರ್', 'ಏಕ ಭಾರತ್ ಶ್ರೇಷ್ಠ ಭಾರತ್', 'ಮೇಕ್ ಇನ್ ಇಂಡಿಯಾ ವಿಕಸಿತ ಭಾರತ್ ಜಿ ಒರ್ ಬಡ್ತೆ ಕದಮ್' ಮುಂತಾದ ಇವರ ಕೃತಿಗಳಲ್ಲದೆ 'ಜಂಗ್ಲಿ ಕುಲಪತಿಗಳ ಕಥೆ' ಹೆಸರಿನ ಇವರ ಆತ್ಮಕಥೆ ಕನ್ನಡ, ಹಿಂದಿ, ತೆಲುಗು, ತಮಿಳು ಭಾಷೆಗಳಲ್ಲಿ ಪ್ರಕಟವಾಗಿದೆ. ರಾಷ್ಟ್ರಪತಿಗಳೊಂದಿಗೆ ಸ್ವೀಡನ್, ನಾರ್ವೆ, ಫಿನ್‌ಲ್ಯಾಂಡ್, ಹಂಗೇರಿ, ಜೋಹನ್ಸ್‌ಬರ್ಗ್, ದಕ್ಷಿಣ ಆಫ್ರಿಕಾ ಮುಂತಾದ ರಾಷ್ಟ್ರಗಳಿಗೆ ಭೇಟಿ ನೀಡಿ ಅಲ್ಲಿಯ ವಿಶ್ವವಿದ್ಯಾಲಯದೊಂದಿಗೆ ಶೈಕ್ಷಣಿಕ ಒಪ್ಪಂದವನ್ನು ಏರ್ಪಡಿಸಿದ್ದಾರೆ. ಭಾರತದ ಬೇರೆ ಬೇರೆ ರಾಜ್ಯಗಳ ವಿಶ್ವವಿದ್ಯಾಲಯಗಳಲ್ಲಿ ಸಿಂಡಿಕೇಟ್ ಸದಸ್ಯರಾಗಿ, ಕೇಂದ್ರ ಹಾಗೂ ರಾಷ್ಟ್ರೀಯ ಶಿಕ್ಷಣ ನೀತಿ, ಬುಡಕಟ್ಟು ಕಲ್ಯಾಣ ಸಮಿತಿ ಸದಸ್ಯರಾಗಿ ಕಾರ್ಯನಿರ್ವಹಿಸಿದ್ದಾರೆ.

ಇವರು 36 ಜನ ಸಂಶೋಧನ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡಿದ್ದಾರೆ. ಶೈಕ್ಷಣಿಕ ಸಮ್ಮೇಳನಗಳ ಆಯೋಜನೆ, ಅಂತಾರಾಷ್ಟ್ರೀಯ ಸಮ್ಮೇಳನಗಳಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗಿಯಾಗಿರುವ ಪ್ರೊ. ಟಿ.ವಿ. ಕಟ್ಟಿಮನಿ ಅವರ ಶೈಕ್ಷಣಿಕ ಸಾಧನೆಗೆ 2018 ರಲ್ಲಿ ಉತ್ತರಪ್ರದೇಶದ ಸುಹಾರ್ದ್ ಪುರಸ್ಕಾರ, ವಾಗ್ಧರ ನವರತ್ನ ಪುರಸ್ಕಾರ, 2017ರಲ್ಲಿ ಆಳ್ವಾಸ್ ನುಡಿಸಿರಿ ಸನ್ಮಾನ, 2019 ರಲ್ಲಿ ಕರ್ನಾಟಕ ಸರ್ಕಾರದ ರಾಜ್ಯೋತ್ಸವ ಪ್ರಶಸ್ತಿ, ಜಿ.ಪಿ. ರಾಜರತ್ನಂ ಸಾಹಿತ್ಯ ಪುರಸ್ಕಾರ, ಬ್ರಹ್ಮಕುಮಾರಿ ಸಂಶೋಧನಾ ಫೌಂಡೇಶನ್ನಿನ ಶಿಕ್ಷಣ ವಿಭೂಷಣ ಪುರಸ್ಕಾರಗಳು ಲಭಿಸಿವೆ.

ಪ್ರೊ. ಟಿ.ವಿ. ಕಟ್ಟಿಮನಿ ಅವರ ಶೈಕ್ಷಣಿಕ ಸಾಧನೆಗಳನ್ನು ಪುರಸ್ಕರಿಸಿ ಕನ್ನಡ ವಿಶ್ವವಿದ್ಯಾಲಯವು 32ನೇ ನುಡಿಹಬ್ಬದಲ್ಲಿ ಪ್ರತಿಷ್ಠಿತ 'ನಾಡೋಜ' ಗೌರವ ಪದವಿಯನ್ನು ನೀಡಿ ಗೌರವಿಸುತ್ತಿದೆ.



## ಪ್ರೊ. ಎಸ್.ಸಿ. ಶರ್ಮಾ

ತುಮಕೂರು ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿಗಳಾದ ಪ್ರೊ. ಎಸ್.ಸಿ. ಶರ್ಮಾ ಅವರು 27.03.1959 ರಂದು ಜನಿಸಿದರು. 1984 ರಲ್ಲಿ ಬೆಂಗಳೂರಿನ ಬಿ.ಎಂ.ಎಸ್. ಇಂಜಿನೀಯರಿಂಗ್ ಕಾಲೇಜಿನಿಂದ ಬಿ.ಇ. ಪದವಿಯನ್ನು ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾದರು. 1988 ರಲ್ಲಿ ಬೆಂಗಳೂರಿನ ಎಂ.ಎಸ್ ರಾಮಯ್ಯ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜಿನಿಂದ ಮೆಟೀರಿಯಲ್ ಕಾಸ್ಟಿಂಗ್ ಸೈನ್ಸ್ ಮತ್ತು ಇಂಜಿನೀಯರಿಂಗ್ (ಲೋಹದ ಎರಕ ವಿಜ್ಞಾನ ಮತ್ತು ಇಂಜಿನೀಯರಿಂಗ್) ವಿಷಯದಲ್ಲಿ ಎಂ.ಇ. ಪದವಿಯನ್ನು ಪಡೆದರು. 1991 ರಲ್ಲಿ ಮೈಸೂರು ವಿಶ್ವವಿದ್ಯಾಲಯದಿಂದ ಮೆಕ್ಯಾನಿಕಲ್ ಇಂಜಿನೀಯರಿಂಗ್ ವಿಷಯದಲ್ಲಿ ಪಿಎಚ್;ಡಿ ಪದವಿಯನ್ನು ಪೂರೈಯಿಸಿದರು. 1998 ರಲ್ಲಿ ಮಂಗಳೂರು ವಿಶ್ವವಿದ್ಯಾಲಯದಿಂದ ಹಾಗೂ 2007 ರಲ್ಲಿ ಆಸ್ಟ್ರೇಲಿಯಾದ ಡೀಕಿನ್ ವಿಶ್ವವಿದ್ಯಾಲಯದಿಂದ ಮೆಟೀರಿಯಲ್ ಸೈನ್ಸ್ ವಿಷಯದಲ್ಲಿ ಅಧ್ಯಯನ ನಡೆಸಿ ಡಾಕ್ಟರ್ ಆಫ್ ಸೈನ್ಸ್ ಪದವಿಯನ್ನು ಪಡೆದರು. ಇವುಗಳ ಜೊತೆಗೆ 2003 ರಲ್ಲಿ ಕುವೆಂಪು ವಿಶ್ವವಿದ್ಯಾಲಯದಿಂದ ಗಣಕ ವಿಜ್ಞಾನ ಮತ್ತು ತಂತ್ರಜ್ಞಾನ ವಿಷಯದಲ್ಲಿ ಡಾಕ್ಟರ್ ಆಫ್ ಸೈನ್ಸ್ ಪದವಿಯನ್ನು, 2007 ರಲ್ಲಿ ಕೊಯಂಬತ್ತೂರಿನ ಅವಿನಾಶಿಲಿಂಗಂ ಮಹಿಳಾ ವಿಶ್ವವಿದ್ಯಾಲಯದ ತಾಂತ್ರಿಕ ನಿಕಾಯದಿಂದ ಡಾಕ್ಟರ್ ಆಫ್ ಸೈನ್ಸ್ ಹಾಗೂ 2007 ರಲ್ಲಿ ಅದೇ ವಿಶ್ವವಿದ್ಯಾಲಯದ ಸಂಗೀತ ನಿಕಾಯದಿಂದ ಡಾಕ್ಟರ್ ಆಫ್ ಲೆಟರ್ಸ್ ಪದವಿಯನ್ನು ಪಡೆದರು. 2013ರಲ್ಲಿ ಬೆಳಗಾವಿಯ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದಿಂದ ಮ್ಯಾನೇಜ್‌ಮೆಂಟ್ ವಿಷಯದಲ್ಲಿ ಡಿಲಿಟ್ ಪದವಿಯನ್ನು ಪಡೆದಿದ್ದಾರೆ.

ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ ಬಳ್ಳಾರಿ, ಕುವೆಂಪು ವಿಶ್ವವಿದ್ಯಾಲಯ ಶಿವಮೊಗ್ಗ, ಅವಿನಾಶಿಲಿಂಗಂ ಮಹಿಳಾ ವಿಶ್ವವಿದ್ಯಾಲಯ ಕೊಯಂಬತ್ತೂರು, ಛತ್ರಪತಿ ಶಾಹುಜೀ ಮಹಾರಾಜ ವಿಶ್ವವಿದ್ಯಾಲಯ ಕಾನ್ಪುರ, ಶ್ರೀ ಚಂದ್ರಶೇಖರೇಂದ್ರ ಸರಸ್ವತಿ ವಿಶ್ವವಿದ್ಯಾಲಯ ಕಾಂಚೀಪುರಂ ಮುಂತಾದ ವಿಶ್ವವಿದ್ಯಾಲಯಗಳು ಗೌರವ ಶ್ರೀಯುತರಿಗೆ ಡಾಕ್ಟರ್ ಆಫ್ ಸೈನ್ಸ್ ಪದವಿ ನೀಡಿ ಪುಸ್ಕರಿಸಿವೆ. ನಾಡಿನ ಬೇರೆಬೇರೆ 27ಕ್ಕೂ ಹೆಚ್ಚು ವಿಶ್ವವಿದ್ಯಾಲಯಗಳ ಘಟಿಕೋತ್ಸವದಲ್ಲಿ ಪಾಲ್ಗೊಂಡು ಯುವ ಮನಸ್ಸುಗಳಿಗೆ ಭಾರತೀಯ ಸಂಸ್ಕೃತಿ, ಪರಂಪರೆ, ಶಿಕ್ಷಣ ಹಾಗೂ ತಾಂತ್ರಿಕ ವಿಷಯವನ್ನೊಳಗೊಂಡ ಘಟಿಕೋತ್ಸವ ಭಾಷಣ ಮಾಡಿರುವುದು ಇವರ ಹೆಗ್ಗಳಿಕೆಯಾಗಿದೆ. ರಾಜ್ಯ-ರಾಷ್ಟ್ರ-ಅಂತಾರಾಷ್ಟ್ರೀಯ ಶೈಕ್ಷಣಿಕ ಸಂಸ್ಥೆಗಳಲ್ಲಿ ಉಪನ್ಯಾಸ ನೀಡಿದ್ದಾರೆ. ಉಪಕುಲಪತಿಗಳಾಗಿ, ನ್ಯಾಕ್ ಕಮಿಟಿ ನಿರ್ದೇಶಕರಾಗಿ, ಆಡಳಿತಾತ್ಮಕ ಸಲಹೆಗಾರರಾಗಿ ಶೈಕ್ಷಣಿಕ ಹಾಗೂ ಆಡಳಿತಾತ್ಮಕ ಹುದ್ದೆಗಳನ್ನು ನಿರ್ವಹಿಸಿದ್ದಾರೆ. ಅಂತಾರಾಷ್ಟ್ರೀಯ ನಿಯತಕಾಲಿಕೆಗಳಲ್ಲಿ 100ಕ್ಕೂ ಹೆಚ್ಚು ಸಂಶೋಧನಾತ್ಮಕ ಲೇಖನಗಳನ್ನು ಪ್ರಕಟಿಸಿದ್ದಾರೆ. ಅನೇಕ ಯೋಜನೆಗಳಲ್ಲಿ ಪ್ರಧಾನ ಸಂಶೋಧಕರಾಗಿ ಕಾರ್ಯನಿರ್ವಹಿಸಿದ್ದಾರೆ. ಇವರ ಮಾರ್ಗದರ್ಶನದಲ್ಲಿ 37 ಜನ ವಿದ್ಯಾರ್ಥಿಗಳು ಪಿಎಚ್.ಡಿ ಪದವಿ ಪಡೆದಿದ್ದಾರೆ.

ಪ್ರೊ. ಎಸ್.ಸಿ. ಶರ್ಮಾ ಅವರ ವಿಜ್ಞಾನ ಹಾಗೂ ತಂತ್ರಜ್ಞಾನದ ಈ ಎಲ್ಲಾ ಸಾಧನೆಗಳನ್ನು ಪುರಸ್ಕರಿಸಿ ಕನ್ನಡ ವಿಶ್ವವಿದ್ಯಾಲಯವು 32ನೇ ನುಡಿಹಬ್ಬದಲ್ಲಿ ಪ್ರತಿಷ್ಠಿತ 'ನಾಡೋಜ' ಗೌರವ ಪದವಿಯನ್ನು ನೀಡಿ ಗೌರವಿಸುತ್ತಿದೆ.